ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 05 ನೇ ಫೆಬ್ರುವರಿ, 2021

ಅಂಗನವಾಡಿ ಕೇಂದ್ರುಗಳ ಕುರಿತು

ಡಾ|| ವೈ. ಎ. ನಾರಾಯಣಸ್ವಾಮಿ(ಶಿಕ್ಷಕರ ಕ್ಷೇತ್ರ) -

440 (540) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿರುವ ಅಂಗನವಾಡಿ ಕೇಂದ್ರುಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಅಂಗನವಾಡಿ ಕೇಂದ್ರುಗಳನ್ನು ತೆರೆಯಲು ಇರುವ ಮಾನದಂಡನೆಗಳೇನು;

(ಇ) ಈ ಅಂಗನವಾಡಿ ಕೇಂದ್ರಕ್ಕೆ ಬರುತ್ತಿರುವ ಮಕ್ಕಳ ಸಂಖ್ಯೆ ಎಷ್ಟು; ಹಾಗೂ ಇಲ್ಲಿ ಕೆಲಸ ಮಾಡುತ್ತಿರುವ ಅಂಗನವಾಡಿ ಕಾರ್ಯಕರ್ತೆಯರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಈ) ಈ ಅಂಗನವಾಡಿ ಕೇಂದ್ರುಗಳಲ್ಲಿ ಕಾರ್ಯಕರ್ತೆಯರನ್ನು ನೇಮಿಸಿಕೊಳ್ಳಲು ಸರ್ಕಾರ ರೂಪಿಸಿರುವ ನಿಯಮಗಳೇನು; ಹಾಗೂ ಇವರಿಗೆ ನೀಡುತ್ತಿರುವ ಗೌರವಧನ ಎಷ್ಟು;

(ಉ) ರಾಜ್ಯದ ಕೆಲ ಅಂಗನವಾಡಿ ಕೇಂದ್ರುಗಳಲ್ಲಿ ಮಕ್ಕಳಿಗೆ ಪೌಷ್ಟಿಕ ಆಹಾರ ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಂತಹ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು?